ಕರ್ನಾಟಕ ಸರ್ಕಾರ

ಸಂಖ್ಯೆ:ಪಪೂಶಿಇ/ಶೈಶಾ-04/ಯುಸಂ-4/2015-16

ನಿರ್ದೇಶಕರ ಕಛೇರಿ.
ಪದವಿ ಪೂರ್ವ ಶಿಕ್ಷಣ ಇಲಾಖೆ
ಸಂಪಿಗೆ ರಸ್ತೆ, 18ನೇ ಕ್ರಾಸ್
ಮಲ್ಲೇಶ್ವರಂ. ಬೆಂಗಳೂರು-12
ದಿನಾಂಕ: 5 -01-2016

ಸುತ್ತೋಲೆ

ವಿಷಯ: 2015-16ನೇ ಸಾಲಿನಲ್ಲಿ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳಿಗೆ ರಾಜ್ಯ ಮಟ್ಟದ **"ಯುವ ಸಂಸತ್ ಸ್ಪರ್ಧೆ"** ನಡೆಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಅ.ಸ.ಪತ್ರ ಸಂಖ್ಯೆ:ಸಂವ್ಯಶಾಇ 11ಯುಸಂಸ್ಪ 2014 ದಿನಾಂಕ07/02/2015.

*****

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯ ಜಂಟಿ ಆಶ್ರಯದಲ್ಲಿ 2015-16ನೇ ಸಾಲಿನ ಪಿಯುಸಿ ವಿದ್ಯಾರ್ಥಿಗಳಿಗೆ ರಾಜ್ಯ ಮಟ್ಟದ **"ಯುವ ಸಂಸತ್ ಸ್ಪರ್ಧೆ"** ಯನ್ನು ಮಾನ್ಯ ಸಂಸದೀಯ ವ್ಯವಹಾರಗಳ ಸಚಿವರ ಸೂಚನೆಯಂತೆ ದಿನಾಂಕ 12-01-2015ರಂದು **"ಕೆ.ಜಿ.ಎಸ್ ಕ್ಲಬ್‌ನ ಸಭಾಂಗಣ, ಕಬ್ಬನ್ ಪಾರ್ಕ್, ಬೆಂಗಳೂರು"** ಇಲ್ಲಿ ಏರ್ಪಡಿಸಲಾಗಿದೆ.

ಆದ್ದರಿಂದ ರಾಜ್ಯ ಮಟ್ಟದ **"ಯುವ ಸಂಸತ್ ಸ್ಪರ್ಧೆ"**ಗೆ ಜಿಲ್ಲಾ ಮಟ್ಟದಲ್ಲಿ ವಿಜೇತರಾದ(ಪ್ರಥಮ ಮತ್ತು ದ್ವಿತೀಯ ಸ್ಥಾನ ಮಾತ್ರ) ಇಬ್ಬರು ವಿದ್ಯಾರ್ಥಿಗಳನ್ನು ಮೇಲ್ಕಂಡ ದಿನಾಂಕದಂದು ಬೆಳಿಗ್ಗೆ 09-00 ಘಂಟೆಗೆ ಸಂಬಂಧಿಸಿದ ಜಿಲ್ಲಾ ಉಪ ನಿರ್ದೇಶಕರು ಕಳುಹಿಸಿಕೊಡಲು ಸೂಕ್ತ ಕ್ರಮ ವಹಿಸಲು ಈ ಮೂಲಕ ಸೂಚಿಸಲಾಗಿದೆ. ಈ ಸ್ಪರ್ಧೆಯ ಸಂಪೂರ್ಣ ಜವಾಬ್ದಾರಿಯನ್ನು ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ಜಿಲ್ಲೆ ಇವರಿಗೆ ವಹಿಸಿರುವುದರಿಂದ ಹೆಚ್ಚಿನ ಮಾಹಿತಿಗಾಗಿ ಇವರನ್ನು ಸಂಪರ್ಕಿಸಲು (ದೂ.ಸಂ 9448560878. 9480814015) ಈ ಮೂಲಕ ತಿಳಿಸಿದೆ.

Fn ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:

1. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಇವರುಗಳಿಗೆ ಸೂಕ್ತ ಕ್ರಮಕ್ಕಾಗಿ.
2. ಸರ್ಕಾರದ ಕಾರ್ಯದರ್ಶಿಗಳು,ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ, ಬೆಂಗಳೂರು ಇವರ ಮಾಹಿತಿಗಾಗಿ.
3. ಉಪ ನಿರ್ದೇಶಕರು, ಬೆಂಗಳೂರು ಉತ್ತರ ಜಿಲ್ಲೆ, ಪದವಿ ಪೂರ್ವ ಶಿಕ್ಷಣ ಇಲಾಖೆ ಇವರಿಗೆ ಮಾಹಿತಿಗಾಗಿ.
4. ಜಂಟಿ ನಿರ್ದೇಶಕರು(ಶೈಕ್ಷಣಿಕ,ಆಡಳಿತ,ಪರೀಕ್ಷೆ ಹಾಗೂ ಮಾನ್ಯತೆ ಮತ್ತು ಅನುದಾನ) ಇವರುಗಳ ಮಾಹಿತಿಗಾಗಿ.
5. ನಿರ್ದೇಶಕರ ಆಪ್ತಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಮಾಹಿತಿಗಾಗಿ.
6. ಲೆಕ್ಕಪತ್ರಾಧಿಕಾರಿಗಳು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಮಾಹಿತಿಗಾಗಿ.
7. ~~ಕಛೇರಿ ಪ್ರತಿ~~. ಸಹಾಯಕ ನಿರ್ದೇಶಕರು, ಇ-ಆಡಳಿತ, ಪ.ಪೂ.ಶಿ ಇಲಾಖೆ ಬೆಂಗಳೂರು ಇವರಿಗೆ ಎಲ್ಲಾ ಉಪ ನಿರ್ದೇಶಕರುಗಳ ಕಾಲೇಜಿಗೆ ವೆಬ್‌ಸೈಟ್‌ಗೆ ಹಾಕುವುದು.
8. ಕಛೇರಿ ಪ್ರತಿ